# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 169 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 14.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2021ರ ಡಿಸೆಂಬರ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿಜೇತರಾದ ಸದಸ್ಯರುಗಳಿಗೆ ಅಧಿಕಾರ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| (ಆ) | ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಚುನಾವಣೆ ಫಲಿತಾಂಶ ಬಂದಿದ್ದರೂ, ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸದಿರಲು ಕಾರಣವೇನು? | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ: 17.12.2021ರ ಆದೇಶದಲ್ಲಿ ಪ್ರಸ್ತುತ ನಿಗದಿಪಡಿಸುತ್ತಿರುವ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಮುಂದಿನ ಆದೇಶದವರೆಗೆ ನಿಗದಿಪಡಿಸದೇ ಸಂವಿಧಾನದ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ನಿಗದಿಪಡಿಸಿ, ಉಳಿದ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಬೇಕಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ. ಈ ಆದೇಶದ ಮೇರೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಹಿಂದುಳಿದ ವರ್ಗಗಳಿಗೆ ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಲು ಸ್ವತಂತ್ರವಾದ ಮತ್ತು ಸಮರ್ಪಿತವಾದ ಆಯೋಗವನ್ನು ರಚಿಸಿ ಆದೇಶಿಸಿರುತ್ತದೆ. ಸದರಿ ಆಯೋಗವು ನೀಡಿರುವ ಶಿಫಾರಸ್ಸನ್ನು ಸಚಿವ ಸಂಪುಟವು ಅನುಮೋದಿಸಿರುತ್ತದೆ. ಸದರಿ ಶಿಫಾರಸ್ಸನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ಆಯೋಗದಿಂದ ಪ್ರಾಯೋಗಿಕ ದತ್ತಾಂಶ(Empirical data) ವರದಿಯನ್ನು ಪಡೆಯುವಂತೆ ಆದೇಶಿಸಿರುತ್ತದೆ. ಪ್ರಸ್ತುತ ಆಯೋಗವು ಪೂರಕ ವರದಿಯನ್ನು ನೀಡಿದ್ದು, ಈ ವರದಿಯನ್ನು ಪರಿಶೀಲಿಸಲಾಗುತ್ತಿದೆ. |

| | | |
|---|---|---|
| | | ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿದೆ. ಪ್ರಕರಣವು ದಿನಾಂಕ:01.03.2023 ರಂದು ವಿಚಾರಣೆಗೆ ಬರಲಿದೆ.<br><br>ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ ನ್ಯಾಯಾಲಯದ ಅಂತಿಮ ತೀರ್ಪಿನ ನಂತರ ಮೀಸಲಾತಿ ನಿಗದಿಪಡಿಸಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸಲು ಕ್ರಮವಹಿಸಲಾಗುವುದು. |
| (ಇ) | ಸರ್ಕಾರವು ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸದೇ ಆಡಳಿತಾಧಿಕಾರಿಗಳನ್ನು ನೇಮಿಸಿರುವುದರಿಂದ ಅಭಿವೃದ್ಧಿ ಕಾರ್ಯ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಪ್ರಸ್ತುತ ಮೀಸಲಾತಿ ಪ್ರಕಟಿಸದಿರುವುದರಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ಆಡಳಿತಾಧಿಕಾರಿಗಳನ್ನು ಸರ್ಕಾರದಿಂದ ನೇಮಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದಿಲ್ಲ. |

ಸಂಖ್ಯೆ: ನಅಇ 2 ಎಲ್‌ಸಿಕ್ಯೂ 2023

**(ಎನ್. ನಾಗರಾಜು ಎಂ.ಟಿ.ಬಿ)**

ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ

ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು